# ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
# ಹಾಗೂ ವಿಶೇಷ ನ್ಯಾಯಾಲಯ, ಹಾವೇರಿ
## ಸ್ಪೆಷಲ್ ಎಸ್.ಸಿ./ಎಸ್.ಟಿ.20/2021

Pw-06

Cw-20

| | |
|---|---|
| ಸಾಕ್ಷಿದಾರರ ಹೆಸರುಃ | ಶಿವಾನಂದ ಮಳಲಿಮಠ |
| ತಂದೆಃಗಂಡನ ಹೆಸರುಃ | ಚನ್ನಬಸಯ್ಯ |
| ವಯಸ್ಸುಃ | 68 ವರ್ಷ |
| ಉದ್ಯೋಗಃ | ಟ್ರ್ಯಾನ್ಸಪೋರ್ಟೇಶನ್ |
| ವಾಸ ಸ್ಥಳಃ | ಹಾವೇರಿ |

**ದಿನಾಂಕ:04.09.2024 ರಂದು ಸಾಕ್ಷಿಯನ್ನು ಕರೆಸಿ, ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರಿಂದಃ**

ಉದಯನಗರದಲ್ಲಿ ಟ್ರಾನ್ಸಪೊರ್ಟೇಶನ್ ಲಾರಿಗಳು ಇವೆ. ಆರೋಪಿತರು ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೇನೂ ಗೊತ್ತಿಲ್ಲ. ನನ್ನ ಸ್ವಾಧೀನದಲ್ಲಿರುವ ಆಸ್ತಿಯಲ್ಲಿ ಏನೂ ಘಟನೆ ನಡೆದಿಲ್ಲ. ಈ ಬಗ್ಗೆ ಪೊಲೀಸರಿಗೆ ಹೇಳಿಕೆ ಕೊಟ್ಟಿಲ್ಲ.

(ಈ ಹಂತದಲ್ಲಿ ಪಿ.ಪಿ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಸಾಕ್ಷಿಯ ಪಾಟೀ ಸವಾಲಿಗೆ ಅನುಮತಿ ನೀಡಲಾಗಿದೆ)

**ಪಾಟೀ ಸವಾಲುಃ ಪಿ.ಪಿ ರವರಿಂದಃ**

ನನ್ನ ಆಸ್ತಿ ನಂ.150 ರಲ್ಲಿ ವಾಣಿಜ್ಯ ಮಳಿಗೆ ಮತ್ತು ಟ್ರಾಲಿ ನಿಲ್ಲಿಸಿಕೊಂಡಿರುತ್ತೇನೆ. ಅದರಲ್ಲಿ ಒಂದು ಮಳಿಗೆಯನ್ನು 1 ನೇ ಆರೋಪಿಗೆ ತಿಂಗಳಿಗೆ ರೂ.2,000/-ರಂತೆ ಬಾಡಿಗೆ ಕೊಟ್ಟಿದ್ದೆ ಎಂದರೆ ಗೊತ್ತಿಲ್ಲ.

ದಿನಾಂಕಃ17.03.2021 ರಂದು ನಮ್ಮ ವಾಣಿಜ್ಯ ಮಳಿಗೆಯಲ್ಲಿ ಬಾಡಿಗೆಗೆ ಇದ್ದ 1 ನೇ ಆರೋಪಿ ಮತ್ತು 2 ನೇ ಆರೋಪಿ ರಾತ್ರಿ 11.00 ಗಂಟೆ ಸಮಯದಲ್ಲಿ ಮಲಗಿಕೊಂಡಿದ್ದ ನಿಂಗಪ್ಪ ಶಿರಗುಪ್ಪಿ ಮತ್ತು ಗಣೇಶ ಕುಂದಾಪುರ ಇವರ ತಲೆಗೆ ಕಬ್ಬಿಣದ ಪ್ರೋರ್ಕ ಮತ್ತು ವೀಲ್ ಪಾನ್ ನಿಂದ ಹೊಡೆದು ಕೊಲೆ ಮಾಡಿರುವುದು ಗೊತ್ತಾಗಿರುತ್ತದೆ ಎಂದು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ.

ನನ್ನ----------------------------- ಗೊತ್ತಾಗಿರುತ್ತದೆ ಎನ್ನುವ ಸಾಕ್ಷಿಯ ತನ್ನ ಹೇಳಿಕೆ ಭಾಗವನ್ನು ಓದಿ ಹೇಳಿದಾಗ ಸಾಕ್ಷಿಯು ತಾನು ಈ ರೀತಿ ಹೇಳಿಕೆ ನೀಡಿಲ್ಲ ಎಂದು ನುಡಿಯುತ್ತಾರೆ. ಸಾಕ್ಷಿಗೆ ಓದಿ ಹೇಳಿದ ಹೇಳಿಕೆ ಭಾಗವನ್ನು ನಿಪಿ-19 ಅಂತಾ ಗುರ್ತಿಸಲಾಯ್ತು. ಎಲ್ಲಾ ವಿಷಯ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯಮಾಡಲು ಸುಳ್ಳು ಹೇಳುತ್ತೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಯು.ಎನ್.ಜಿ ವಕೀಲರಿಂದಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇಲೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು ಮತ್ತು ವಿಶೇಷ ನ್ಯಾಯಾಧೀಶರು ಹಾವೇರಿ.